**ಕರ್ನಾಟಕ ಲೋಕಸೇವಾ ಆಯೋಗ, ' ಉದ್ಯೋಗ ಸೌಧ ', ಬೆಂಗಳೂರು-560001**

**ಸಂಖ್ಯೆ: ಆರ್(1)610/2025-26/ಪಿಎಸ್‌ಸಿ** **ದಿನಾಂಕ: 05-09-2025**

**ಪತ್ರಿಕಾ ಪ್ರಕಟಣೆ**

ಆಯೋಗದ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ-4/2024 ದಿನಾಂಕ 20-09-2024 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 31-12-2024ರನ್ವಯ ಹೈ.ಕ ವೃಂದದಡಿ ಅಧಿಸೂಚಿಸಲಾಗಿದ್ದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ **42** ಹುದ್ದೆಗಳು ಹಾಗೂ ಸಹಾಯಕ ಕೃಷಿ ಅಧಿಕಾರಿ 231 ಹುದ್ದೆಗಳಿಗೆ ದಿನಾಂಕ: 06-09-2025ರಂದು ಕನ್ನಡ ಭಾಷಾ ಪರೀಕ್ಷೆಯನ್ನು ಮತ್ತು ದಿನಾಂಕ: 07-09-2025 ಹಾಗೂ 04-10-2025ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಿಗದಿಪಡಿಸಲಾಗಿತ್ತು.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024 ಭಾ-3, ದಿನಾಂಕ:04-09-2025ರಂದು ಹೊರಡಿಸಿರುವ ಸುತ್ತೋಲೆಯಲ್ಲಿ **"ದಿನಾಂಕ: 28.10.2024ರ ಹಿಂದೆ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಯಾವುದಾದರೂ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅಂತಹ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನು ಸಹ ರದ್ದುಗೊಳಿಸಿ, ಪರಿಶಿಷ್ಟಜಾತಿ ಒಳ ಮೀಸಲಾತಿಯನ್ನು ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಬೇಕೆಂದು"** ಸೂಚಿಸಲಾಗಿರುವುದರಿಂದ ಹೈ.ಕ ವೃಂದದಡಿ ಅಧಿಸೂಚಿಸಲಾಗಿದ್ದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ **42 ಹಾಗೂ** ಸಹಾಯಕ ಕೃಷಿ ಅಧಿಕಾರಿ 231 ಹುದ್ದೆಗಳಿಗೆ ದಿ: 06-09-2025ರಂದು ನಿಗದಿಪಡಿಸಲಾಗಿದ್ದ ಕನ್ನಡ ಭಾಷಾ ಪರೀಕ್ಷೆ ಮತ್ತು ದಿ: 07-09-2025 ಹಾಗೂ 04-10-2025ರ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ರದ್ದುಪಡಿಸಲಾಗಿದೆ.

**ಸಹಿ/-**
**ಕಾರ್ಯದರ್ಶಿ**
**ಕರ್ನಾಟಕ ಲೋಕಸೇವಾ ಆಯೋಗ**

**ಟಿಪ್ಪಣಿ:** ಈ ಪತ್ರಿಕಾ ಪ್ರಕಟಣೆಯನ್ನು 'ನ್ಯೂಸ್ ಐಟಂ' ಆಗಿ ಎಲ್ಲಾ ದಿನಪತ್ರಿಕೆಗಳಲ್ಲಿ ಪ್ರಕಟಿಸಲು ಕೋರಿದೆ.